ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಏಜೆನ್ಸಿಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವೇತನ ನೀಡದಿರುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

07 (163) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಅಡುಗೆಯವರು, ಅಡುಗೆ ಸಹಾಯಕರು ಮತ್ತು ರಾತ್ರಿ ಕಾವಲುಗಾರರ ಸಿಬ್ಬಂದಿಗಳ ಸೇವೆಯನ್ನು ಒದಗಿಸಲು ಹೊರಸಂಪನ್ಮೂಲ ಏಜೆನ್ಸಿಯವರಿಗೆ ಟೆಂಡರ್ ನಿಬಂಧನೆಗಳಿಗೊಳಪಟ್ಟು ಕಾರ್ಯಾದೇಶವನ್ನು ನೀಡಿರುವುದು ನಿಜವೇ;

(ಆ) ಕಾರ್ಯಾದೇಶದಲ್ಲಿನ ಷರತ್ತಿನನ್ವಯ ಮುಂಗಡವಾಗಿ ಕನಿಷ್ಠ 2 ಮಾಹೆಗಳಿಗೆ ಕನಿಷ್ಟ ವೇತನ ಕಾಯ್ದೆಯನ್ವಯ ಸಂದಾಯವಾಗಬೇಕಾದ ವೇತನವನ್ನು ಸಂಬಂಧಿಸಿದ ಸಿಬ್ಬಂದಿಗಳ ಬ್ಯಾಂಕ್ ಖಾತೆಗೆ ಇ.ಸಿ.ಎಸ್. ಅಥವಾ ಆರ್.ಟಿ.ಜಿ.ಎಸ್. ಮೂಲಕ ಪ್ರತಿ ತಿಂಗಳು 5ನೇ ದಿನಾಂಕದೊಳಗೆ ವೇತನ ಪಾವತಿಸಬೇಕಾಗಿರುವುದು ನಿಜವಲ್ಲವೇ;

(ಇ) ಸರ್ಕಾರದಿಂದ ನಿಗಧಿತ ಅನುದಾನ ಬಡುಗಡೆಯಾಗದಿರುವುದರಿಂದ 4-5 ತಿಂಗಳಾದರೂ ವೇತನ ಪಾವತಿಸದೆ ಸದರಿ ಏಜೆನ್ಸಿಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಜೀವನ ನಿರ್ವಹಣೆಗೆ ತುಂಬಾ ತೊಂದರೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸಿಬ್ಬಂದಿಗೆ ಕೂಡಲೇ ವೇತನವನ್ನು ಪಾವತಿಸುವ ಸಂಬಂಧ ಸರ್ಕಾರ ಹಣ ಬಿಡುಗಡೆಗೊಳಿಸಲು ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)